# 1 ನೇ ಹೆಚ್ಚುವರಿ ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ರವರ ನ್ಯಾಯಾಲಯ, ಹಾನಗಲ್

## CC No.935/2021

| | | | | |
|---|---|---|---|---|
| ಸಾಕ್ಷಿದಾರರ ಹೆಸರು | : | ಹೊನ್ನಗೌಡ ಪಾಟೀಲ | ಪಿಡಬ್ಲ್ಯೂ | 06 |
| ತಂದೆ ಹೆಸರು | : | ಧರ್ಮಗೌಡ | ಸಿ ಡಬ್ಲ್ಯೂ | 06 |
| ವಯಸ್ಸು | : | 40 ವರ್ಷ | | |
| ಉದ್ಯೋಗ | : | ವ್ಯವಸಾಯ | | |
| ವಾಸ ಸ್ಥಳ | : | ಚಿಕ್ಕಹುಲ್ಲಾಳ | | |

**ದಿನಾಂಕ: 27.03.2026 ರಂದು ಸಾಕ್ಷಿದಾರರನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ: ಸಹಾಯಕ ಸರಕಾರಿ ಅಭಿಯೋಜಕರಿಂದ:**

ನನಗೆ ಚಾಸಾ-1,4 ರಿಂದ 6 ಯಾರು ಎಂದು ಗೊತ್ತಿಲ್ಲ. ಆರೋಪಿತರು ಸಹ ನನಗೆ ಯಾರು ಎಂದು ಗೊತ್ತಿಲ್ಲ. ಸದರಿ ಈ ಪ್ರಕರಣದ ಬಗ್ಗೆ ನನಗೆ ಯಾವುದೇ ಮಾಹಿತಿ ಇಲ್ಲ. ಪೋಲಿಸರು ನನ್ನನ್ನು ವಿಚಾರಣೆ ಮಾಡಿ ಹೇಳಿಕೆ ಪಡೆದಿಲ್ಲ.

**(ಈ ಹಂತದಲ್ಲಿ ಮಾನ್ಯ ಎಪಿಪಿ ಯವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಅಂತಾ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೇಳಿದರು. ಅನುಮತಿ ನೀಡಲಾಗಿದೆ)**

**ಪಾಟೀ ಸವಾಲು: ಸಹಾಯಕ ಸರಕಾರಿ ಅಭಿಯೋಜಕರಿಂದ**

ನನಗೆ ಚಾಸಾ-1 ಮತ್ತು ಮನೆಯ ಸದಸ್ಯರ ಬಗ್ಗೆ ಮಾಹಿತಿ ಇರುತ್ತದೆ ಎಂದರೆ ಸರಿಯಲ್ಲ. ಚಾಸಾ-1 ಮತ್ತು ಆರೋಪಿತರ ಮಧ್ಯ ಸರ್ವೆ ನಂ. 32 ಕ್ಕೆ ಸಂಬಂಧಿಸಿದಂತೆ ತಕರಾರು ಇದ್ದ ಬಗ್ಗೆ ನನಗೆ ಗೊತ್ತಿದೆ ಎಂದರೆ ಸರಿಯಲ್ಲ. ದಿಃ 05.07.2015 ರಂದು ನಾನು ಹಾಗೂ ಚಾಸಾ-8 ರವರು ನಮ್ಮ ಗ್ರಾಮದ ಬಸ್ ನಿಲ್ದಾಣದಲ್ಲಿ ಇದ್ದಾಗ ಚಾಸಾ-1,4,5 ರವರು ಅಳುತ್ತಾ ಬಂದಿದ್ದು ನಾವು ಏಕೆ ಅಳುತ್ತಿದ್ದೀರಿ ಎಂದು ವಿಚಾರಿಸಿದಾಗ ಆರೋಪಿತರು ಚಾಸಾ-1 ರವರನ್ನು ಅಡ್ಡಗಟ್ಟಿ ತರಬಿ ಕೈಯಿಂದ ಹೊಡೆದು ಅವಾಚ್ಯ ಶಬ್ದಗಳಿಂದ ಬೈದು ಸದರಿ ತಂಟೆದ ಜಮೀನಿನಲ್ಲಿ ಹಾಕಿದ ಗೋವಿನಜೋಳ ಮತ್ತು ಹತ್ತಿ ಬೆಳೆಯನ್ನು ಲುಕ್ಸಾನು ಪಡೆಸಿರುತ್ತಾರೆ ಎಂದು ಸದರಿಯವರು ನನಗೆ

ಹೇಳಿರುತ್ತಾರೆ ಎಂದರೆ ಸರಿಯಲ್ಲ. ಹಾಗೂ ಸದರಿಯವರು ಚಿಕಿತ್ಸೆ ಪಡೆಯಲು ಹಾನಗಲ್ ಸರಕಾರಿ ಆಸ್ಪತ್ರೆಗೆ ಹೋಗುತ್ತೇವೆ ಎಂದು ಹೇಳಿ ಹೋದರು ಎಂದರೆ ಸರಿಯಲ್ಲ. ಆನಂತರ ಚಾಸಾ-1 ರವರು ದಿಃ 07.07.2015 ರಂದು ದೂರು ದಾಖಲಿಸಿದ ಬಗ್ಗೆ ನನಗೆ ಗೊತ್ತಾಯಿತು ಎಂದರೆ ಸರಿಯಲ್ಲ. ಸಾಕ್ಷಿಯ ಹೇಳಿಕೆಯನ್ನು ಆತನಿಗೆ ಓದಿ ಹೇಳಿದ್ದು ಸದರಿ ಹೇಳಿಕೆಯ ಸಂಗತಿಗಳನ್ನು ಸಾಕ್ಷಿ ಅಲ್ಲಗಳೆದಿದ್ದರಿಂದ ಸದರಿ ಹೇಳಿಕೆಯನ್ನು ನಿಪಿ-5 ಎಂದು ಗುರುತಿಸಲಾಯಿತು. ನಾನು ನಿಪಿ-5 ರಂತೆ ಪೋಲಿಸರಿಗೆ ಹೇಳಿಕೆ ನೀಡಿದ್ದರೂ ಸಹ ಆರೋಪಿತರಿಗೆ ಸಹಾಯ ಮಾಡಲು ಹೇಳಿಕೆ ನೀಡಿಲ್ಲ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**:ಪಾಟೀ ಸವಾಲು: ಆರೋಪಿ ಪರ ವಕೀಲರಿಂದ:**

ಆರೋಪಿ ಪರ ವಕೀಲರು ಪಾಟೀ ಸವಾಲು ಏನೂ ಇಲ್ಲ ಅಂತಾ ಹೇಳಿರುತ್ತಾರೆ.

: ಮರುವಿಚಾರಣೆ : ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ನ. ಸ. ಓ. ಹೇ. ಕೆ ಸರಿ ಇದೆ
ಎಂದು ಒಪ್ಪಿರುತ್ತಾರೆ.

Sd/-
C/C 1 ನೇ ಹೆಚ್ಚುವರಿ ಹಿರಿಯ ದಿವಾಣಿ ನ್ಯಾಯಾಧೀಶರು
ಹಾಗೂ ಜೆ ಎಂ ಎಫ್ ಸಿ ಹಾನಗಲ್

ಈಗ ಸಾಕ್ಷಿಗೆ ನಿಪಿ–1 ದೂರನ್ನು ತೋರಿಸಿದ್ದು ಸದರಿ ದೂರಿನ ಮೇಲಿರುವ ತನ್ನ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ ಮೇರೆಗೆ ಸದರಿ ಸಹಿಯನ್ನು ನಿಪಿ–1 ಎ ಎಂದು ಗುರುತಿಸಲಾಯಿತು.